# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ | : | (822)85 |
| ಸದಸ್ಯರ ಹೆಸರು | : | ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 24.08.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಪಠ್ಯ ಪುಸ್ತಕಗಳನ್ನು ರಾಜ್ಯದ ಎಲ್ಲಾ ಕಾಲೇಜು ವಿದ್ಯಾರ್ಥಿಗಳಿಗೆ ಪೂರ್ಣ ಪ್ರಮಾಣದಲ್ಲಿ ಪುಸ್ತಕಗಳನ್ನು ನೀಡಲಾಗಿದೆಯೇ; | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಪಠ್ಯಪುಸ್ತಕಗಳನ್ನು ಉಚಿತವಾಗಿ ವಿತರಿಸಲು ಕ್ರಮವಹಿಸಲಾಗುತ್ತಿದೆ.<br><br>2026-27ನೇ ಸಾಲಿನಿಂದ ಮೊದಲ ಬಾರಿಗೆ ವಿದ್ಯಾವಿಕಾಸ ಯೋಜನೆಯಡಿ ಪದವಿ ಪೂರ್ವ ಶಿಕ್ಷಣ ಹಂತದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಥಮ ಹಾಗೂ ದ್ವಿತೀಯ ಪಿಯು ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಉಚಿತವಾಗಿ ನೀಡುವ ಯೋಜನೆಯನ್ನು ಜಾರಿಗೆ ತರಲಾಗಿದೆ.<br><br>2025-26ನೇ ಸಾಲಿನಲ್ಲಿದ್ದ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಆಧರಿಸಿ 27,22,363 ಪ್ರತಿಗಳಿಗೆ ಕರ್ನಾಟಕ ಪಠ್ಯಪುಸ್ತಕ ಸಂಘಕ್ಕೆ ಬೇಡಿಕೆ ಸಲ್ಲಿಸಲಾಗಿತ್ತು. ಇದರಲ್ಲಿ 13,72,096 ಪಠ್ಯಪುಸ್ತಕಗಳನ್ನು ಕರ್ನಾಟಕ ಪಠ್ಯ ಪುಸ್ತಕ ಸಂಘದ ಮೂಲಕ ಮುದ್ರಿಸಿ, ಈಗಾಗಲೇ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ವಿತರಿಸಲಾಗಿದೆ. |
| ಆ) | ರಾಜ್ಯದ ಕೆಲವು ಕಡೆ ಕಾಲೇಜು ವಿದ್ಯಾರ್ಥಿಗಳಿಗೆ ಇನ್ನು ಪಠ್ಯ ಪುಸ್ತಕ ನೀಡಲಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇಂತಹ ಪ್ರಕರಣಗಳ ಪೂರ್ಣ ವಿವರ ನೀಡುವುದು. | ಹೌದು.<br><br>ಪಠ್ಯಪುಸ್ತಕಗಳನ್ನು ಕೂಡಲೇ ವಿತರಿಸಲು ಕ್ರಮವಹಿಲಾಗುವುದು. |

Scanned with OKEN Scanner

| | | |
|---|---|---|
| ಇ) | ಪದವಿ ಪೂರ್ವ ಕಾಲೇಜುಗಳು ಆರಂಭವಾಗಿ ಅರ್ಧ ಶೈಕ್ಷಣಿಕ ವರ್ಷಗಳೇ ಕಳೆದರೂ ಪಠ್ಯ ಪುಸ್ತಕ ವಿತರಣೆಯಾಗದೆ ಇರುವುದರಿಂದ ವಿದ್ಯಾರ್ಥಿಗಳ ಕಲಿಕೆ ಕುಂಠಿತವಾಗಿರುವುದರಿಂದ ಸರ್ಕಾರ ಇದಕ್ಕೆ ಕಾರಣಕರ್ತರಾದ ಮೇಲೆ ಯಾವ ಕ್ರಮವನ್ನು ಕೈಗೊಂಡಿದೆ.? | ಇದೇ ಮೊದಲ ಬಾರಿಗೆ ವಿದ್ಯಾವಿಕಾಸ ಯೋಜನೆಯಡಿ ಪದವಿ ಪೂರ್ವ ಶಿಕ್ಷಣ ಹಂತದ ಪ್ರಥಮ ಹಾಗೂ ದ್ವಿತೀಯ ಪಿಯು ತರಗತಿಗಳಿಗೆ ಪಠ್ಯಪುಸ್ತಕಗಳನ್ನು ಉಚಿತವಾಗಿ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ.<br><br>ಪಠ್ಯಪುಸ್ತಕಗಳ ಮುದ್ರಣ ಹಾಗೂ ವಿತರಣೆಯನ್ನು ಕರ್ನಾಟಕ ಪಠ್ಯಪುಸ್ತಕ ಸಂಘದಿಂದ ನಿರ್ವಹಿಸಲಾಗುತ್ತಿದೆ.<br><br>ಇಲಾಖೆಯು ಈಗಾಗಲೇ ಉಚಿತ ಪಠ್ಯ ಪುಸ್ತಕಗಳ ಬೇಡಿಕೆಯನ್ನು ಕರ್ನಾಟಕ ಪಠ್ಯಪುಸ್ತಕ ಸಂಘಕ್ಕೆ ನೀಡಿದ್ದು, ಅದರಂತೆ ಕೆ.ಟಿ.ಬಿ.ಎಸ್ ನಲ್ಲಿರುವ ದಾಸ್ತಾನು ಸಂಖ್ಯೆಯನ್ನು ಪರಿಗಣಿಸಿ ಹೆಚ್ಚುವರಿಯಾಗಿ ಬೇಕಾದ ಪಠ್ಯಪುಸ್ತಕಗಳನ್ನು ಈಗಾಗಲೇ ಕೆ.ಟಿ.ಬಿ.ಎಸ್ ನಿಂದ ಮುದ್ರಿಸಿ ವಿತರಿಸಲಾಗಿದೆ.<br><br>ಯಾವುದೇ ಕಾಲೇಜುಗಳಿಗೆ ಭಾಗಶಃ ಪಠ್ಯಪುಸ್ತಕಗಳು ಪೂರೈಕೆ ಆಗಿದ್ದಲ್ಲಿ ಈಗಾಗಲೇ ಕಾಲೇಜಿನಲ್ಲಿರುವ ಬುಕ್ ಬ್ಯಾಂಕ್ ಯೋಜನೆ ಹಾಗೂ ಗ್ರಂಥಾಲಯಗಳಲ್ಲಿ ಲಭ್ಯವಿರುವ ಪಠ್ಯಪುಸ್ತಕಗಳನ್ನು ಬಳಸಿಕೊಳ್ಳಲು ತಿಳಿಸಲಾಗಿದೆ ಹಾಗೂ ಇಲಾಖೆ ಜಾಲತಾಣದಲ್ಲಿಯೂ ಸಹ ಪಠ್ಯಪುಸ್ತಕಗಳ ಸಾಫ್ಟ್ ಪ್ರತಿಗಳನ್ನು ಅಳವಡಿಸಿದ್ದು, ಅವುಗಳನ್ನು ಬಳಸಿಕೊಳ್ಳುವಂತೆಯೂ ಸಹ ಮಾಹಿತಿ ನೀಡಲಾಗಿದೆ.<br><br>2025-26ನೇ ಸಾಲಿನ ವಿದ್ಯಾರ್ಥಿಗಳ ಸಂಖ್ಯೆಯ ಆಧಾರದ ಮೇಲೆ ಶೀರ್ಷಿಕೆಗಳ ಸಂಖ್ಯೆಯನ್ನು ಮಾಧ್ಯಮವಾರು ನಿಗದಿಪಡಿಸಿ ಕೊಳ್ಳಲಾಗಿತ್ತು. ಆದರೆ ಈ ಬಾರಿ ಪ್ರಥಮ ಪಿಯು ತರಗತಿಗಳಿಗೆ ಹೆಚ್ಚುವರಿಯಾಗಿ 45,000 ವಿದ್ಯಾರ್ಥಿಗಳು ದಾಖಲಾತಿ ಹೊಂದಿರುವ ಹಿನ್ನೆಲೆಯಲ್ಲಿ ದಾಖಲಾತಿ ಹೊಂದಿದ ಪ್ರಥಮ ಪಿಯು ವಿದ್ಯಾರ್ಥಿಗಳಿಗೂ ಪಠ್ಯಪುಸ್ತಕಗಳನ್ನು ವಿತರಿಸಲು ಕ್ರಮ ತೆಗೆದುಕೊಳ್ಳಲಾಗುವುದು. |

ಸಂಖ್ಯೆ: ಇಪಿ 92 ಎಂಸಿಡಿ 2026

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

Scanned with OKEN Scanner